ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಅತಿವೃಷ್ಟಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 17/10/20

# ರಾಜ್ಯಕ್ಕೆ ನೆರವಿನ ಹಸ್ತ

## ಸಿಎಂ ಬಿಎಸ್‌ವೈಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಕರೆ

## ಮನೆ ಕಳಕೊಂಡವರಿಗೆ ತಕ್ಷಣ 10 ಸಾವಿರ ಪರಿಹಾರ: ಸಿಎಂ

ಬೆಂಗಳೂರು/ನವದೆಹಲಿ: ಭಾರೀ ಮಳೆಯಿಂದ ಸಂಕಷ್ಟಕ್ಕೀಡಾಗಿರುವ ಕರ್ನಾಟಕದ ಜನತೆಗೆ ಪ್ರಧಾನಿ ನರೇಂದ್ರ ಮೋದಿ ನೆರವಿನ ಭರವಸೆ ನೀಡಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಪ್ರಧಾನಿ ಮೋದಿ, ಕರ್ನಾಟಕದ ವಿವಿಧ ಪ್ರದೇಶಗಳಲ್ಲಿನ ಪ್ರವಾಹ ಸ್ಥಿತಿ ಬಗ್ಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಜತೆಗೆ ಮಾತನಾಡಿ, ನೆರೆ ಹಾನಿಯ ವಿವರ ಪಡೆದಿದ್ದಾರೆ. ಪ್ರವಾಹದಿಂದ ಸಂತ್ರಸ್ತರಾಗಿರುವ ನಮ್ಮ ಸಹೋದರ ಮತ್ತು ಸಹೋದರಿಯರ ಜತೆ ನಾವಿದ್ದೇವೆ ಎಂಬ ಭರವಸೆ ನೀಡುತ್ತಿದ್ದೇನೆ. ಕೇಂದ್ರದ ವತಿಯಿಂದ ನಡೆಯುತ್ತಿರುವ ರಕ್ಷಣಾ ಕಾರ್ಯವೂ ಸೇರಿದಂತೆ ಕೇಂದ್ರದಿಂದ ಸಿಗುವ ಎಲ್ಲಾ ಸಹಾಯದ ಬಗ್ಗೆ ಅಭಯ ನೀಡುತ್ತಿದ್ದೇನೆ ಎಂದಿದ್ದಾರೆ.



ಮಹಾರಾಷ್ಟ್ರದಲ್ಲಿ ಭಾರೀ ಮಳೆಯಾಗುತ್ತಿದ್ದು ಅಲ್ಲಿನ ಸಿಎಂ ಉದ್ಧವ್ ಠಾಕ್ರೆ ಅವರ ಜತೆಗೂ ಪ್ರಧಾನಿ ದೂರವಾಣಿ ಸಂಭಾಷಣೆ ನಡೆಸಿದರು. ಸದ್ಯ ಮಹಾರಾಷ್ಟ್ರದಲ್ಲಿನ ಮಳೆಯಿಂದಾಗಿಯೇ ಉತ್ತರ ಕರ್ನಾಟಕದ ಬಹು ಭಾಗಗಳಲ್ಲಿ ಪ್ರವಾಹ ಉಂಟಾಗಿದೆ.

**ಕೇಂದ್ರದಿಂದ ಸಹಾಯದ ಭರವಸೆ:** ಅತ್ತ ಮೈಸೂರಿನಲ್ಲಿ ಮಾತನಾಡಿದ ಸಿಎಂ ಬಿ.ಎಸ್. ಯಡಿಯೂರಪ್ಪ ಅವರು, ಕೇಂದ್ರ ಸರ್ಕಾರ ನಮ್ಮ ಮನವಿಗೆ ಸ್ಪಂದಿಸಿ ನೆರೆ ಪರಿಹಾರ ನೀಡಲು ಒಪ್ಪಿಕೊಂಡಿದೆ. ರಾಜ್ಯಕ್ಕೆ ಹೆಚ್ಚಿನ ಪರಿಹಾರ ನೀಡುವ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿದಾಗ ಅಗತ್ಯ ನೆರವು ನೀಡಲು ಒಪ್ಪಿಕೊಂಡಿದ್ದಾರೆ. ತಕ್ಷಣವೇ ಕೇಂದ್ರ ಅನುದಾನ ಬಿಡುಗಡೆ ಮಾಡಲಿದೆ. ರಾಜ್ಯ ಸರ್ಕಾರದಲ್ಲಿ ಹಣದ ಕೊರತೆ ಇಲ್ಲ, ಎಲ್ಲಾ ಡೀಸಿಗಳ ಖಾತೆಗೆ ಅನುದಾನ ಬಿಡುಗಡೆ ಮಾಡಿದ್ದೇವೆ. ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಮನೆ ಕಳೆದುಕೊಂಡವರಿಗೆ ತತ್‌ಕ್ಷಣಕ್ಕೆ 10 ಸಾವಿರ ರೂ. ಪರಿಹಾರ ನೀಡುತ್ತೇವೆ ಮತ್ತು ಐದು ಲಕ್ಷ ರೂ.ಗಳನ್ನು ಮನೆ ನಿರ್ಮಾಣಕ್ಕೆ ಬಿಡುಗಡೆ ಮಾಡುತ್ತೇವೆ ಎಂದರು.

**85.49 ಕೋಟಿ ಬಿಡುಗಡೆ:** ರಾಜ್ಯದ ಪ್ರವಾಹ ಪೀಡಿತ ಜಿಲ್ಲೆಗಳಿಗೆ ತುರ್ತು ಪರಿಹಾರಕ್ಕಾಗಿ 85.49 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಸಿಎಂ ತಿಳಿಸಿದ್ದಾರೆ. ಪ್ರವಾಹದಿಂದ ಹಾನಿಗೊಳಗಾದ 12 ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಪಂ ಸಿಇಒಗಳೊಂದಿಗೆ ಶುಕ್ರವಾರ ಮುಖ್ಯಮಂತ್ರಿ ವಿಡಿಯೋ ಸಂವಾದ ನಡೆಸಿದ್ದಾರೆ.

ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ ಮಾಡಲು ಕ್ರಮ ವಹಿಸಿ, ಸಂತ್ರಸ್ತರಿಗೆ ಉತ್ತಮ ಆಹಾರ ಪೂರೈಸಿ, ಕಾಳಜಿ ಕೇಂದ್ರಗಳಲ್ಲಿ ಎಸ್‌ಒಪಿ ಪಾಲನೆ ಮಾಡಿ ಎಂದರು. ಉಡುಪಿ, ದಕ್ಷಿಣ ಕನ್ನಡ, ಬಾಗಲಕೋಟೆ ಹಾಗೂ ಬಳ್ಳಾರಿ ಜಿಲ್ಲೆಗಳಿಂದ 14 ದೋಣಿಗಳನ್ನು ಕಲಬುರಗಿ, ಯಾದಗಿರಿ ಜಿಲ್ಲೆಗಳಿಗೆ ಕಳುಹಿಸಲಾಗಿದೆ. ಸಂಘ ಸಂಸ್ಥೆಗಳು, ಸಾರ್ವಜನಿಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ನಿರ್ವಹಿಸಿ ಎಂದು ಅಧಿಕಾರಿಗಳಿಗೆ ಕರೆ ನೀಡಿದರು. ಇದೇ ವೇಳೆ, ಬೆಳೆ ಹಾನಿಯಾದ 51,810 ರೈತರ ಬ್ಯಾಂಕ್ ಖಾತೆಗೆ 36.57 ಕೋಟಿ ರೂ. ಇನ್ಪುಟ್ ಸಬ್ಸಿಡಿಯನ್ನು ಆನ್‌ಲೈನ್ ಮೂಲಕ ಜಮೆ ಮಾಡಿದರು.

**5** ಲಕ್ಷ ರೂ. ಸಂತ್ರಸ್ತರಿಗೆ ಮನೆ ನಿರ್ಮಾಣಕ್ಕೆ ಪರಿಹಾರ ಘೋಷಣೆ

**85.49** ಕೋಟಿ ಪ್ರವಾಹ ಪೀಡಿತ ಜಿಲ್ಲೆಗಳಿಗೆ ತುರ್ತು ಪರಿಹಾರ

**5** ಕೋಟಿ (ತಲಾ) ಡಿಸಿಗಳ ಖಾತೆಗೆ ಬಿಡುಗಡೆ

### ಡೀಸಿಗಳ ಖಾತೆಗೆ ಹಣ

ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ತುರ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳ ಖಾತೆಗೆ ಹಣಕಾಸು ಇಲಾಖೆಯಿಂದ ತಲಾ ಐದು ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ತೀವ್ರ ಹಾನಿಯಾಗಿರುವ ಕಲಬುರಗಿ ಜಿಲ್ಲೆಗೆ 20 ಕೋಟಿ ರೂ., ಯಾದಗಿರಿ ಜಿಲ್ಲೆಗೆ 15 ಕೋಟಿ ರೂ. ಬಿಡುಗಡೆ ಮಾಡಿದ್ದು ಉಳಿದ ಜಿಲ್ಲೆಗಳಿಗೆ ತಲಾ ಐದು ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ.

### ರಾಷ್ಟ್ರೀಯ ವಿಪತ್ತು ಘೋಷಿಸಿ

ಕಲಬುರಗಿ: ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಿಂದೆಂದೂ ಕಂಡರಿಯದ ಮಳೆಯಿಂದಾಗಿರುವ ಅತಿವೃಷ್ಟಿ ಹಾನಿಯನ್ನು ರಾಷ್ಟ್ರೀಯ ವಿಪತ್ತು ಎಂಬುದಾಗಿ ಘೋಷಿಸುವಂತೆ ಕೇಂದ್ರಕ್ಕೆ ಪತ್ರ ಬರೆಯುವುದಾಗಿ ಕಂದಾಯ ಸಚಿವ ಆರ್. ಅಶೋಕ ಹೇಳಿದರು. ಶುಕ್ರವಾರ ಕಲಬುರಗಿ ಜಿಲ್ಲೆಯಲ್ಲಿ ಪ್ರವಾಹದಿಂದ ಆಗಿರುವ ಹಾನಿಯನ್ನು ಅಶೋಕ್ ವೀಕ್ಷಿಸಿದರು. ಈ ಭಾಗದಲ್ಲಿ ಹಿಂದೆಂದೂ ಆಗದಿರುವಷ್ಟು ವ್ಯಾಪಕ ಮಳೆಯಾಗಿ ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ ಎಂದು ಹೇಳಿದರು.



ಇಂಡಿಯಲ್ಲಿ ಮರ ಏರಿ ಕುಳಿತಿದ್ದ 104ರ ಅಜ್ಜಿಯ ರಕ್ಷಣೆ.